

**ಸೀರೆಯ ಬಗೆಗಿನ ಮೀಮಾಂಸೆಗಳು ಮಹಾಭಾರತದ ಕಥನದಷ್ಟೇ ಬೃಹತ್ತು. ಮಹಾಭಾರತದ ಕೇಂದ್ರವೂ ಸೀರೆಯೇ. ಈ 'ಸೀರೆ ಕಥನ'ಗಳಿಗೆ ಹೊಸ ಸೇರ್ಪಡೆಯಾದ ಈ ಬರಹ ಕಟ್ಟಿಕೊಡುವ ಸೀರೆ ಸ್ಮೃತಿಗಳು ಹಾಗೂ ಆಧುನಿಕ ಚಿತ್ರಗಳು ಭಾರತೀಯ ಭಾವಕೋಶಗಳೊಂದಿಗೆ ಸೀರೆ ತಳಕು ಹಾಕಿಕೊಂಡ ಬಗೆಯನ್ನು ಸೊಗಸಾಗಿ ಚಿತ್ರಿಸಿದೆ.**

**■ ವಸುಂಧರಾ ಕದಲೂರು**

ಕಲೆಕ್ಷನ್‌ನಲ್ಲಿ ಇಲ್ಲವಲ್ಲ ಎಂದು ಪೇಚಾಡದ ಮಹಿಳೆಯರನ್ನು ದುರ್ಬೀನಿನಲ್ಲಿ ಹುಡುಕಬೇಕು.

ಸೀರೆಗೊಂದು ಸೊಗಸು ಬರುವುದೇ ಅದರ ಬಣ್ಣ, ಕಸೂತಿ, ಸೆರಗಿನ ಮೆರುಗು, ಅಂಚಿನ ಸೊಬಗು, ನೆರಿಗೆ ಚಿಮ್ಮುವ ಪರಿಯಿಂದ. ಒಂದಿಬ್ಬರು ಹೆಂಗಳೆಯರು ಬಿಡುವಿದ್ದು ಸೀರೆ ಮಳಿಗೆಯೊಂದಕ್ಕೆ ಕಾಲಿಟ್ಟರೆಂದರೆ ನೋಡಿ, ಪ್ರತೀ ಸೀರೆಯ ಗುಣಗಾನ ಮಾಡುತ್ತಾ, ಅಂಚು ಸವರುತ್ತಾ, ಸೆರಗಿನ ವೈಭವ ಬಣ್ಣಿಸುತ್ತಾ, ಉಟ್ಟರೆ ಎಷ್ಟು ನೆರಿಗೆ ಬರಬಹುದೆಂದು ಅಂದಾಜಿಸುತ್ತಾ, ಅದರ ಗುಣಮಟ್ಟ, ಕಸೂತಿ, ಪ್ರಿಂಟ್, ಬಣ್ಣವನ್ನು ವಿಶ್ಲೇಷಿಸುತ್ತಾ ಇಡೀ ದಿನ ಅಲ್ಲಿಯೇ ಹೊತ್ತು ಕಳೆದು ಬರಬಲ್ಲರು.

ಸೀರೆ ಎಂದರೆ ಕೇವಲ ಒಂದು ಬಗೆಯ ಉಡುಪೆಂದು ಸಾಮಾನ್ಯೀಕರಿಸುವುದು ಸರಿಯಲ್ಲ. ಸೀರೆ ಎಂಬುದು ಹಲವು ಭಾವನೆಗಳ ಸಂಗಮ. ಮೇಲೆ ಉದಾಹರಿಸಿದ ಅಣ್ಣಾವ್ರ ಹಾಡಿನ ಒಳ ದನಿ ಕೂಡ ಇದೇ ಆಗಿದೆ. ಯಾವ ಯಾವ ಕಾರ್ಯಕ್ರಮಗಳಿಗೆ ಯಾವ ಬಗೆಯ ಸೀರೆ ಉಡಬೇಕೆನ್ನುವುದೂ ರೂಢಿಯಲ್ಲಿದೆ. ಮದುವೆ ಹೆಣ್ಣಿಗೆ ಆರತಕ್ಷತೆಗೆ ಮರೂನ್ ಬಣ್ಣದ ದೊಡ್ಡಂಚಿನ ರೇಷ್ಮೆ, ಧಾರೆಗೆ ಬಿಳಿ/ಕೆನೆ ಬಣ್ಣಕ್ಕೆ ಕೆಂಪಂಚಿನ ರೇಷ್ಮೆ; ಸೀಮಂತಕ್ಕೆ ಹಸಿರು ಬಣ್ಣದ ರೇಷ್ಮೆ, ಬಾಣಂತನದಲ್ಲಿ ಮೆತ್ತನೆಯ ಹತ್ತಿ ಸೀರೆ, ಹಬ್ಬ ಹರಿದಿನಗಳಿಗೆ, ಶುಭ ಕಾರ್ಯಗಳಿಗೆ, ತಿಥಿ ಅಂತ್ಯಕ್ರಿಯೆಗಳಿಗೆ ಹೀಗೆ... ಋತುಮಾನ ಆಧಾರಿತ ಬೆಳೆಗಳಿರುವಂತೆ, ಕಾರ್ಯಕ್ರಮ ಆಧರಿಸಿ ಸೀರೆ ಉಡುವುದಿರುತ್ತದೆ! ಭಾರೀ ದಪ್ಪಂಚಿನ ರೇಷ್ಮೆ ಸೀರೆಯುಟ್ಟು ಶೋಕ ಕಾರ್ಯಗಳಿಗೆ ಯಾರೂ ಹೋಗುವುದಿಲ್ಲ. ಹಾಗೇ ಸಾದಾಸೀರೆಯುಟ್ಟು ವೈಭವದ ಮದುವೆ ಇತರೆ ಸಮಾರಂಭಗಳನ್ನು ಮಾಡುವುದಿಲ್ಲ. ಇದು ಜನರ ಔಚಿತ್ಯಪ್ರಜ್ಞೆಯನ್ನು ಪ್ರತಿಬಿಂಬಿಸುತ್ತದೆ.

ಕಲಾವಿದರಿಗೆ ಅಷ್ಟೇನು ಗೌರವ ಕೊಡದ ಕಾಲದಿಂದ ಹಿಡಿದು, ಅವರನ್ನು ಆರಾಧಿಸುವ ಕಾಲದವರೆಗೂ ಅವರನ್ನು ಅನುಸ(ಕ)ರಿಸುವ ಸಾಮಾಜಿಕರು ಹೆಚ್ಚಿನ ಪ್ರಮಾಣದಲ್ಲಿದ್ದಾರೆ. ಅದರಲ್ಲೂ ನಟಿಯರ ಉಡುಗೆ, ಅಲಂಕಾರ, ಕೇಶ ವಿನ್ಯಾಸ, ನಡಿಗೆಯ ಭಂಗಿ, ಮಾತಿನ ಶೈಲಿ, ಅನುಕರಿಸದವರುಂಟೆ?! ಅದಕ್ಕೆಂದೇ ಅವರನ್ನು 'ಫ್ಯಾಷನ್ ಐಕಾನ್' ಎನ್ನುವುದು. ಸೀರೆ ಎಂದರೆ, ಮೋಟು ಸೆರಗಿನಿಂದ ಹಿಡಿದು ಮೈಲುಗಟ್ಟಲೆ ಗಾಳಿಪಟದ ಹಾಗೆ ಬಿಡುವವರೆಗೂ ಸಿನಿಮಾ ಮಂದಿಯನ್ನೇ ಅನುಕರಿಸುತ್ತಾರೆ. ಬೆಳ್ಳಿಮೋಡ, ಆಪ್ತಮಿತ್ರ, ಹಾಲುಂಡ ತವರು, ಚಂದ್ರಮುಖಿ ಪ್ರಣಸಖಿ, ಚಾಂದಿನಿ, ಹಮ್ ಆಪ್ ಕೆ ಹೇ ಕೌನ್, ರಂಗೀಲಾ, ನಾಗಿನ್ ಹೀಗೆ ಆಯಾ ಕಾಲದ ಜನಪ್ರಿಯ ಸಿನಿಮಾಗಳಲ್ಲಿ ನಾಯಕಿ ಉಟ್ಟ ಸೀರೆ ಟ್ರೆಂಡ್ ಆಗಿ, ಅದೇ ಹೆಸರಿನ ಸೀರೆಗಳು ಮಾರುಕಟ್ಟೆಯನ್ನು ಆಳಿರುವುದುಂಟು. ಈಗ ಬಿಡಿ, ಮನೆಮನೆಗಳಲ್ಲಿ ಟೀವಿಗಳಿದ್ದು ಧಾರಾವಾಹಿಗಳು ವೈವಿಧ್ಯಮಯ ಉಡುಪುಗಳನ್ನು, ಅದರಲ್ಲೂ ಕಣ್ಣುಕುಕ್ಕುವ ರಂಗು, ಚಿತ್ತಾರ, ಜರಿಯ ಸೀರೆಗಳನ್ನು ಮಹಿಳೆಯರಿಗೆ ಪರಿಚಯಿಸುತ್ತಿವೆ.

ಸೀರೆ ಎನ್ನುವ ಹೆಸರು ಒಂದೇ ಆಗಿದ್ದರೂ, ಅದನ್ನು ಉಡುವುದರಲ್ಲಿ, ಸೆರಗು ಹಾಕುವುದರಲ್ಲಿ, ಹಲವು ವಿಧಾನಗಳಿವೆ, ರೀತಿ–ರೂಢಿಗಳಿವೆ ಎಂದರೆ ಆಶ್ಚರ್ಯಪಡಬೇಕಿಲ್ಲ. ಗೊಬ್ಬೆ, ಕಚ್ಚೆ, ಕೂರ್ಗ್, ಮರಾಠಿ, ತಮಿಳು, ಬಂಗಾಳಿ, ಮಲೆಯಾಳಿ, ತಮಿಳರ ಶೈಲಿ ಹೀಗೆ ಪ್ರಾದೇಶಿಕತೆ, ಜನಾಂಗಗಳ ವೈವಿಧ್ಯವನ್ನು ಸೀರೆಗಳು ಪ್ರತಿನಿಧಿಸುತ್ತವೆ. ಉಡುವ ಮಾದರಿಯಲ್ಲದೆ, ಅವುಗಳ ಫ್ಯಾಬ್ರಿಕ್ಕೂ ಪ್ರಾದೇಶಿಕತೆಯ ಸೊಗಡನ್ನು ಸಾರುತ್ತವೆ. ಮೈಸೂರ್ ಸಿಲ್ಕ್, ಕಲ್ಕತ್ತಾ ಕಾಟನ್, ಕಂಚಿ, ಇಕ್ಕತ್, ಇಳಕಲ್, ಚಂದೇರಿ, ಬಾಂದನಿ, ಜೈಪುರಿ, ಹ್ಯಾಂಡ್ಲೂಮ್, ಲಂಬಾಣಿ, ಮಹೇಶ್ವರಿ, ಧರ್ಮಾವರಂ, ಕಾಂಚಿಪುರಂ, ಬನಾರಸಿ, ಮೊಳಕಾಲ್ಮೂರು, ಕೊಡಿಯಾಲ, ಸಂಬಾಲ್ಪುರಿ, ಕಲಂಕಾರಿ. ಶುದ್ಧ ರೇಷ್ಮೆ, ಶುದ್ಧ ಜರಿ, ಶುದ್ಧ ಹತ್ತಿ, ಶುದ್ಧ ಕೈಮಗ್ಗ, ಶುದ್ಧ ಕಸೂತಿ. ಹೀಗೆ ಪಟ್ಟಿಯನ್ನು ವಿಸ್ತರಿಸುತ್ತಾ ಹೋಗಬಹುದು! ಬೆಂಗಳೂರಿನಂತಹ ಮಹಾನಗರಗಳಲ್ಲಿರುವ ಯಾವುದಾದರೂ ಒಂದು ಸೀರೆ ಅಂಗಡಿಯ ಒಳ ಹೊಕ್ಕರೆ, ಸೀರೆಗಳಲ್ಲಿರುವ ವರ್ಣ ವೈವಿಧ್ಯ, ಪ್ರಾದೇಶಿಕ ವೈವಿಧ್ಯವನ್ನು ಕಣ್ತುಂಬಿಕೊಂಡು ಬರಬಹುದು.

ಹತ್ತಿ ಬಟ್ಟೆಯಿಂದಾದ ನಿಸರ್ಗ ಸ್ನೇಹಿ ಕೈಮಗ್ಗದ ದೇಸಿ ಸೀರೆಗಳಿಗೆ ಆಧುನಿಕರು ಬುದ್ಧಿಭಾವಗಳಿಂದ ಶರಣಾಗಿದ್ದಾರೆ. ದೇಸೀ ಸೀರೆಗಳು ಅವರ ಮನಸೂರೆಗೊಂಡಿವೆ. ಶುದ್ಧ ಹತ್ತಿಯ, ನೈಸರ್ಗಿಕ



